**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**12.01.2025** **6.40 p.m.**

**<><><><>**

ಮುಖ್ಯಾಂಶಗಳು

- ವಿಕಸಿತ ಭಾರತ ಯುವ ಸಂವಾದ-೨೦೨೫; ಕರ್ನಾಟಕ ಸೇರಿದಂತೆ ದೇಶದ ವಿವಿಧ ರಾಜ್ಯಗಳ ಯುವಕರೊಂದಿಗೆ ಪ್ರಧಾನಿ ವಿಚಾರ ವಿನಿಮಯ
- ಸ್ವಾಮಿ ವಿವೇಕಾನಂದರ ಜಯಂತಿ ಅಂಗವಾಗಿ ರಾಜ್ಯದ ವಿವಿಧೆಡೆ ರಾಷ್ಟ್ರೀಯ ಯುವ ದಿನ ಆಚರಣೆ
- ೨೦೫೧ರ ವೇಳೆಗೆ ದೇಶದ ೫೦ ರಷ್ಟು ನಗರಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ವಿಶೇಷ ಯೋಜನೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
- ಮಲೆನಾಡು ಭಾಗದಲ್ಲಿ ಕಾಡಾನೆಗಳ ಹಾವಳಿ ತಪ್ಪಿಸಲು ರೈಲ್ವೆ ಬ್ಯಾರಿಕೇಡ್ ನಿರ್ಮಾಣ

<><><><>

ಯುವಶಕ್ತಿಯು ಶೀಘ್ರದಲ್ಲೇ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಆಶಯ ವ್ಯಕ್ತಪಡಿಸಿದ್ದಾರೆ. ನವದೆಹಲಿಯ ಭಾರತ್ ಮಂಟಪದಲ್ಲಿ ಇಂದು ನಡೆದ ವಿಕಸಿತ ಭಾರತ ಯುವ ನಾಯಕರ ಸಂವಾದ-೨೦೨೫ ಉದ್ದೇಶಿಸಿ ಅವರು ಮಾತನಾಡಿದರು. ಈ ಸಂವಾದದಲ್ಲಿ ರಾಜ್ಯದ ೭೬ ಯುವಕರು ಭಾಗವಹಿಸಿದ್ದಾರೆ. ಸಂವಾದದಲ್ಲಿ ಭಾಗವಹಿಸಿದ ಬೆಂಗಳೂರಿನ ನಿಮ್ಹಾನ್ಸ್ ನರ್ಸಿಂಗ್ ಕಾಲೇಜಿನ ದ್ವಿತೀಯ ವರ್ಷದ ವಿದ್ಯಾರ್ಥಿನಿ ಸುಚಿತ್ರ ಕೆ. ಆಕಾಶವಾಣಿಯೊಂದಿಗೆ ತಮ್ಮ ಅನುಭವವನ್ನು ಹಂಚಿಕೊಂಡಿದ್ದಾರೆ.

**ಧ್ವನಿ: ಸುಚಿತ್ರ. ಕೆ, ವಿದ್ಯಾರ್ಥಿನಿ**

ಮತ್ತೊಂದೆಡೆ, ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ಯುವಜನೋತ್ಸವದಲ್ಲಿ ೪೩ ವಿದ್ಯಾರ್ಥಿಗಳು ಹಾಗೂ ೩೩ ಸಾಂಸ್ಕೃತಿಕ ಪ್ರತಿನಿಧಿಗಳು ಸೇರಿದಂತೆ ರಾಜ್ಯದ ಒಟ್ಟು ೭೬ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಇದೇ ವೇಳೆ, ಯುವಜನೋತ್ಸವದಲ್ಲಿ ಮಂಡ್ಯ ಜಿಲ್ಲೆಯ ಡೊಳ್ಳು ಕುಣಿತ ಮತ್ತು ಜಾನಪದ ಗೀತೆ ತಂಡಕ್ಕೆ ಎರಡನೇ ಸ್ಥಾನ ದೊರೆತಿದೆ.

<><><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರ ಜಯಂತಿಯ ಅಂಗವಾಗಿ ಇಂದು ರಾಷ್ಟ್ರೀಯ ಯುವ ದಿನ ಆಚರಿಸಲಾಯಿತು. ಗದಗ ಜಿಲ್ಲಾಡಳಿತ ಕಾರ್ಯಾಲಯದ ಸಭಾಭವನದಲ್ಲಿ ಸ್ವಾಮಿ ವಿವೇಕಾನಂದರ ಜಯಂತ್ಯೋತ್ಸವ ಕಾರ್ಯಕ್ರಮ ಜರುಗಿತು. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡುವ ಮೂಲಕ ಗೌರವ ಸಮರ್ಪಿಸಿದರು. ದೊಡ್ಡಬಳ್ಳಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೃಷ್ಣಪ್ಪ ಮಾತನಾಡಿ, ಸ್ವಾಮಿ ವಿವೇಕಾನಂದರು ಅಂಧಕಾರದಲ್ಲಿ ಮುಳುಗಿದ್ದ ಭಾರತದ ಯುವಜನತೆಯಲ್ಲಿ ಜಾಗೃತಿ ಮೂಡಿಸಿ, ಭಾರತದ ಹಿರಿಮೆಯನ್ನು ಪ್ರಪಂಚದಾದ್ಯಂತ ಸಾರಿದ್ದು, ಯುವ ಜನರಿಗೆ ಸ್ಫೂರ್ತಿಯಾಗಿದ್ದಾರೆ ಎಂದು ಹೇಳಿದರು. ಸ್ವಾಮಿ ವಿವೇಕಾನಂದ ಮತ್ತು ರಾಮಕೃಷ್ಣ ಪರಮಹಂಸರ ವಿಚಾರಧಾರೆಗಳು ಇಂದಿನ ಸಮಾಜಕ್ಕೆ ಮತ್ತು ಯುವ ಸಮುದಾಯಕ್ಕೆ ದಾರಿದೀಪವಾಗಿವೆ ಎಂದು ಹಿರಿಯೂರು ಶಾರದಾಶ್ರಮದ ಅಧ್ಯಕ್ಷರಾದ ಚೈತನ್ಯಮಯಿ ಮಾತಾಜಿ ಹೇಳಿದ್ದಾರೆ. ರಾಮನಗರ ಜಿಲ್ಲೆಯ ಚನ್ನಪಟ್ಟಣದ ಸ್ವಾಮಿ ವಿವೇಕಾನಂದ ನಗರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನೆಮ್ಮದಿಯ ಮತ್ತು ಶಾಂತಿಯ ಬದುಕನ್ನು ರೂಪಿಸಿಕೊಳ್ಳಲು

ಶ್ರೀರಾಮಕೃಷ್ಣ ಪರಹಂಸರು, ಶಾರದಾ ಮಾತೆ ಹಾಗೂ ಸ್ವಾಮಿ ವಿವೇಕಾನಂದರ ವಿಚಾರಧಾರೆಗಳ ಅನುಷ್ಠಾನ ಅಗತ್ಯವಾಗಿವೆ ಎಂದು ಅಭಿಪ್ರಾಯಪಟ್ಟರು.

<><><>

ಸಾಮಾಜಿಕ ವ್ಯವಸ್ಥೆಯಲ್ಲಿ ಮದುವೆ ಬಹು ಮುಖ್ಯ ಪಾತ್ರ ವಹಿಸುತ್ತದೆ. ಹಾಗಾಗಿ ಹೆಚ್ಚು ಹೆಚ್ಚು ಸರಳ ಸಾಮೂಹಿಕ ವಿವಾಹಗಳು ನಡೆಯುವಂತಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲೂಕು ಬಂಡಿಹಳ್ಳಿಯಲ್ಲಿ ನಡೆದ ಸರ್ವಧರ್ಮಗಳ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಬಸವಣ್ಣನವರು ೧೨ನೇ ಶತಮಾನದಲ್ಲಿಯೇ ಸಾಮೂಹಿಕ ವಿವಾಹಗಳನ್ನು ಬೆಂಬಲಿಸಿದ್ದರು ಎಂದರು. ಸರ್ವಧರ್ಮಗಳ ಸಾಮೂಹಿಕ ವಿವಾಹದಲ್ಲಿ ಹಿಂದೂ ಮತ್ತು ಮುಸ್ಲಿಂ ಸೇರಿದಂತೆ ಒಟ್ಟು ೨೩ ಜೋಡಿಗಳು ವೈವಾಹಿಕ ಜೀವನಕ್ಕೆ ಪಾದರ್ಪಣೆ ಮಾಡಿದರು.

<><><>

೨೦೫೧ರ ವೇಳೆಗೆ ದೇಶದ ಶೇಕಡ ೫೦ ರಷ್ಟು ನಗರಗಳ ಅಭಿವೃದ್ಧಿ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ವಿಶೇಷ ಯೋಜನೆಯನ್ನು ರೂಪಿಸುತ್ತಿದೆ ಎಂದು ಕೇಂದ್ರ ಇಂಧನ ಸಚಿವ ಪ್ರಹ್ಲಾದ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿ-ಧಾರವಾಡ ಸ್ಮಾರ್ಟ್ ಸಿಟಿ ಅನುದಾದಡಿಯಲ್ಲಿ ಹಳೇ ಬಸ್ ನಿಲ್ದಾಣ ಅಭಿವೃದ್ಧಿ ಕಾಮಗಾರಿ ಲೋಕಾರ್ಪಣೆ ಮಾಡಿ, ಮಾತನಾಡಿದ ಅವರು, ಹುಬ್ಬಳಿಯಲ್ಲಿ ೩೦೦ ಕೋಟಿ ರೂಪಾಯಿ ವೆಚ್ಚದಲ್ಲಿ ವಿಮಾನ ನಿಲ್ದಾಣವನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. ನಾಲ್ಕು ವಿಮಾನಗಳ ಸಂಚಾರವನ್ನು ಹೆಚ್ಚಿಸಲು ಯೋಜಿಸಲಾಗಿದೆ ಎಂದರು. ದಾವಣಗೆರೆ, ತುಮಕೂರು ನೇರ ರೈಲ್ವೆ ಮಾರ್ಗಕ್ಕೆ ಒತ್ತು ನೀಡಲಾಗುತ್ತಿದೆ. ಇದರಿಂದ ಹುಬ್ಬಳ್ಳಿ-ಬೆಂಗಳೂರು ನಡುವಿನ ರೈಲ್ವೆ ಸಂಚಾರ ಅವಧಿಯಲ್ಲಿ ಒಂದು ಗಂಟೆ ಕಡಿಮೆಯಾಗಲಿದೆ. ಅಲ್ಲದೇ ಹುಬ್ಬಳ್ಳಿ ರೈಲ್ವೆ

ನಿಲ್ದಾಣವನ್ನು ಮೇಲ್ದರ್ಜೆಗೆ ಏರಿಸಲು ಹೆಚ್ಚಿನ ಅನುದಾನವನ್ನು ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

**ಬೈಟ್: ಸಚಿವ ಪ್ರಹ್ಲಾದ ಜೋಶಿ**

<><><><>

ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ, ಶೃಂಗೇರಿ, ಎನ್.ಆರ್.ಪುರ ಸೇರಿ ಮಲೆನಾಡು ಭಾಗದಲ್ಲಿ ಉಂಟಾಗುತ್ತಿರುವ ಕಾಡಾನೆಗಳ ಹಾವಳಿ ತಪ್ಪಿಸಲು ರೈಲ್ವೆ ಬ್ಯಾರಿಕೇಡ್ ನಿರ್ಮಿಸಿ ಶಾಶ್ವತ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಶೃಂಗೇರಿ ಶಾಸಕ ಟಿ.ಡಿ.ರಾಜೇಗೌಡ ತಿಳಿಸಿದ್ದಾರೆ. ಶೃಂಗೇರಿ ತಾಲೂಕಿನ ಶೆಟ್ಟಿ ಕೊಪ್ಪ ಭದ್ರಾ ಕಾಲೊನಿಯಲ್ಲಿ ಕಾಡಾನೆಗಳು ದಾಳಿ ನಡೆಸಿದ ಕೃಷಿ ಭೂಮಿ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಭಾಗದಲ್ಲಿ ಕಾಡಾನೆಗಳಿಂದ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ರಾಜ್ಯ ಸರ್ಕಾರ ಮತ್ತು ಅರಣ್ಯ ಸಚಿವರಿಗೆ ಮಾಹಿತಿ ನೀಡಲಾಗಿದೆ ಎಂದರು. ರೈಲ್ವೆ ಬ್ಯಾರಿಕೇಡ್ ಅಳವಡಿಕೆಗೆ ೨೦ ಕೋಟಿ ರೂಪಾಯಿ ವೆಚ್ಚವಾಗಲಿದ್ದು, ಶೀಘ್ರವಾಗಿ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಅವರು ಮಾಹಿತಿ ನೀಡಿದರು.

<><><><>

ರಾಜ್ಯ ವಿಧಾನ ಪರಿಷತ್ ಸಭಾಪತಿ ಕಚೇರಿ ಹಾಗೂ ಇತರೆ ವಿಷಯಗಳಲ್ಲಿ ಅನಗತ್ಯವಾದ ಸಂಘರ್ಷ ಸರಿಯಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅಭಿಪ್ರಾಯಪಟ್ಟಿದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮತ್ತು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಪ್ರಕರಣಕ್ಕೆ ಸಂಬಂಧಿಸಿದಂತೆ ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಶಾಸಕಾಂಗದ ಮೇಲೆ ಸವಾರಿ ಮಾಡುತ್ತಿದ್ದು, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅನೇಕ ಸಲಹೆ, ಸೂಚನೆ

ನೀಡಿದ್ದಾರೆ. ಇಲ್ಲಿ ಸರ್ಕಾರ ಅದನ್ನು ಪಾಲನೆ ಮಾಡುವುದು ಒಳ್ಳೆಯದು. ಸರ್ಕಾರದ ನಡೆ ವಿರೋಧಿಸಿ, ಬಸವರಾಜ ಹೊರಟ್ಟಿ ಅವರು ಪತ್ರ ಬರೆದಿದ್ದಾರೆ ಎಂದು ಹೇಳಿದರು.

<><><>

ಕನ್ನಡ ಭಾಷೆಯ ಅನೇಕ ಪದಗಳು ಸಂಸ್ಕೃತ ಮೂಲದ್ದಾಗಿವೆ. ಕನ್ನಡ ನಾಡಿನ ಊರಿನ ಹೆಸರುಗಳೂ ಸಂಸ್ಕೃತ ಭಾಷೆ ಆಧಾರಿತವಾಗಿವೆ. ಸಂಸ್ಕೃತವನ್ನು ಕೈಬಿಟ್ಟರೆ ಕನ್ನಡಕ್ಕೇ ನಷ್ಟ ಎಂದು ಹಿರಿಯ ಸಾಹಿತಿ ಡಾ. ಎಸ್.ಎಲ್.ಭೈರಪ್ಪ ಅಭಿಪ್ರಾಯಪಟ್ಟಿದ್ದಾರೆ. ಮಂಗಳೂರು ಲಿಟ್ ಫೆಸ್ಟ್‌ನಲ್ಲಿಂದು ನಡೆದ ಸಂವಾದದಲ್ಲಿ ಮಾತನಾಡಿದ ಅವರು, ತಮ್ಮ ಕಾದಂಬರಿಗಳಲ್ಲಿ ಎದುರಾಗುವ ಸಂಕಟದ ಚಿತ್ರಣ ಹಾಗೂ ಪಾತ್ರಗಳು ತಮ್ಮ ಅನುಭವದಿಂದಲೇ ಬಂದವುಗಳಾಗಿವೆ ಎಂದರು. ಪರ್ವ ಕಾದಂಬರಿ ಬರೆಯುವ ಮುನ್ನ ಹಿಮಾಲಯ ಸಹಿತ ದೇಶಾದ್ಯಂತ ಸಂಚರಿಸಿದ್ದೇನೆ. ಹೀಗೆ ಅನುಭವಗಳೇ ಕಾದಂಬರಿಯಲ್ಲಿ ಪ್ರತಿಫಲನಗೊಂಡಿವೆ ಎಂದು ಅವರು ತಿಳಿಸಿದರು.

<><><>

ಗದಗ ಜಿಲ್ಲೆಯ ಗಜೇಂದ್ರಗಢದಲ್ಲಿ ೧೦ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಇದೇ ೨೦ ರಿಂದ ಎರಡು ದಿನ ನಡೆಯಲಿರುವ ಹಿನ್ನೆಲೆಯಲ್ಲಿ ಇಂದು ಜಿಲ್ಲಾ ಉಸ್ತುವಾರಿ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್, ಸಮ್ಮೇಳನದ ಲಾಂಛನ ಮತ್ತು ಭಿತ್ತಿಪತ್ರವನ್ನು ಬಿಡುಗಡೆ ಮಾಡಿದರು. ಬಳಿಕ ಮಾತನಾಡಿದ ಸಚಿವರು, ಗದಗ ಜಿಲ್ಲೆಯು ಸಂಗೀತ, ಇತಿಹಾಸ, ಕಲೆ, ಸಂಸ್ಕೃತಿಗೆ ಹೆಸರುವಾಸಿಯಾಗಿದೆ. ಜನರು ಇತಿಹಾಸದ ಬಗ್ಗೆ ಅರಿಯುವಂತಾಗಲು ಈ ಸಮ್ಮೇಳನ ವಿಶೇಷ ಪ್ರೇರಣೆ ನೀಡಲಿ ಎಂದು ಆಶಿಸಿದರು.

<><><>

ಗ್ರಾಮಸ್ಥರು ಮತ್ತು ಶಾಲಾ ಮಕ್ಕಳು ಪುಸ್ತಕ ಗೂಡನ್ನು ಹೆಚ್ಚು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ರೋಣ ಶಾಸಕ ಜಿ.ಎಸ್.ಪಾಟೀಲ್ ಹೇಳಿದ್ದಾರೆ. ಗದಗ ಜಿಲ್ಲೆಯ ರೋಣ ತಾಲೂಕಿನ ಜಕ್ಕಲಿದ ಬಸ್ ನಿಲ್ದಾಣದಲ್ಲಿ ಪುಸ್ತಕ ಗೂಡು ಉದ್ಘಾಟಿಸಿ ಮಾತನಾಡಿದ ಅವರು, ರೋಣ ತಾಲೂಕಿನ ೨೨ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳಲ್ಲಿ ಪುಸ್ತಕ ಗೂಡುಗಳನ್ನು ಸ್ಥಾಪಿಸಲಾಗುವುದು ಎಂದು ತಿಳಿಸಿದರು. ತಾಲೂಕ ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಮಾತನಾಡಿ, ಜನರ ಬಿಡುವಿನ ಸಮಯದಲ್ಲಿ ಪುಸ್ತಕ ಓದುವ ಹವ್ಯಾಸ ಮೂಡಲಿ ಎಂಬ ಧ್ಯೇಯದೊಂದಿಗೆ ಬಸ್ ನಿಲ್ದಾಣಗಳಲ್ಲಿ, ಉದ್ಯಾನಗಳಲ್ಲಿ, ಸಾರ್ವಜನಿಕ ಕಚೇರಿಗಳಲ್ಲಿ ಪುಸ್ತಕ ಗೂಡುಗಳು ಸ್ಥಾಪನೆಯಾಗಲಿವೆ ಎಂದರು.

<><><>

ದೇಶದಲ್ಲೇ ಅಪರೂಪವಾದ ಜೀವ ವೈವಿಧ್ಯತೆಯು ಉತ್ತರ ಕನ್ನಡ ಜಿಲ್ಲೆಯಲ್ಲಿದ್ದು, ಈ ಜೀವ ವೈವಿಧ್ಯತೆಯನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಕೆನರಾ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕೆ.ವಿ.ವಸಂತ ರೆಡ್ಡಿ ಹೇಳಿದ್ದಾರೆ. ಕಾರವಾರದಲ್ಲಿ ಕರ್ನಾಟಕ ಜೀವ ವೈವಿಧ್ಯ ಮಂಡಳಿ ಹಾಗೂ ಸಾಮಾಜಿಕ ಅರಣ್ಯ ವಿಭಾಗ, ಕಾರವಾರ ಇವರ ಸಹಯೋಗದಲ್ಲಿ ಆಯೋಜಿಸಿದ್ದ ಜೀವ ವೈವಿಧ್ಯತೆಯ ಸಂರಕ್ಷಣೆಯ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಜೀವ ವೈವಿಧ್ಯತೆ ಸಂರಕ್ಷಣೆಗೆ ಸಾರ್ವಜನಿಕರು ಕೈಜೋಡಿಸಬೇಕು. ಪ್ರಪಂಚದಲ್ಲಿ ೫ ಸಾವಿರ ಸಸ್ಯ ಪ್ರಭೇದಗಳಿದ್ದು, ಈ ಪೈಕಿ ಒಂದು ಸಾವಿರದ ೭೦೦ ಪ್ರಭೇದಗಳು ಪಶ್ಚಿಮ ಘಟ್ಟಗಳಲ್ಲಿ ಮಾತ್ರ ಕಾಣಲು ಸಿಗುತ್ತವೆ ಎಂದರು.

<><><>

ಸಂಕ್ಷಿಪ್ತ ಸುದ್ದಿಗಳು

1. ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಸಕ್ತ  ಸಾಲಿನ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳ ಆಹ್ವಾನಿಸಲಾಗಿದ್ದು, ಫೆಬ್ರವರಿ ೪ ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಕಲ್ಯಾಣ ವಿಭಾಗದ ವಿಶೇಷ ಆಯುಕ್ತ ಸುರಳ್ಕರ್ ವಿಕಾಸ್ ಕಿಶೋರ್ ತಿಳಿಸಿದ್ದಾರೆ.
2. ರಾಷ್ಟ್ರಿಯ ಆರೋಗ್ಯ ಅಭಿಯಾನ ಅಡಿಯಲ್ಲಿ ಕಿರಿಯ ಆರೋಗ್ಯ ಸಹಾಯಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಪಟ್ಟಿಯಿಂದ ತಾತ್ಕಾಲಿಕ ಮತ್ತು ಕಾಯ್ದಿರಿಸಿದ ಆಯ್ಕೆ ಪಟ್ಟಿಯನ್ನು ಉತ್ತರ ಕನ್ನಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಮತ್ತು ಕಾರವಾರದ ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>